# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1229 (1441)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ಭೂ ಪರಿವರ್ತನೆಯ ವಿಳಂಬದ ಬಗ್ಗೆ

(ಅ) ಸರ್ಕಾರವು ಭೂ ಪರಿವರ್ತನೆ ಪ್ರಕರಣಗಳಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಹಾಗೂ ಪಾರದರ್ಶಕತೆಯನ್ನು ತರುವ ದೃಷ್ಟಿಯಿಂದ ಭೂಪರಿವರ್ತನೆ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಿ ಅಫಿಡೆವಿಟ್ ಮತ್ತು ಮಾಸ್ಟರ್ ಪ್ಲಾನ್ ಆಧಾರಿತ ಭೂ ಪರಿವರ್ತನೆ ತಂತ್ರಾಂಶವನ್ನು ಜಾರಿಗೆ ತಂದಿರುತ್ತದೆ ಹಾಗೂ 30 ದಿನಗಳ ಕಾಲಮಿತಿಯನ್ನು ನಿಗದಿಪಡಿಸಿರುತ್ತದೆ. ಆದರೂ ಸಹ ಹಲವು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ 30 ದಿನಗಳು ಮೇಲ್ಪಟ್ಟು ಸಾಕಷ್ಟು ಅರ್ಜಿಗಳು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ವಿಳಂಬ ಮಾಡಿದವರ ವಿರುದ್ಧ ಕೈಗೊಂಡ ಕ್ರಮಗಳೇನು;

(ಇ) 30 ದಿನಗಳ ಕಾಲಮಿತಿಯನ್ನು ಮೀರಿದ ಅರ್ಜಿಗಳು ಇಲ್ಲಿಯವರೆಗೆ ಒಟ್ಟು ಎಷ್ಟು ಬಾಕಿ ಇವೆ;

(ಈ) ಈ ವಿಳಂಬವನ್ನು ತಪ್ಪಿಸಲು ಮೋಜಣಿ ಸ್ಕೆಚ್ ತಂತ್ರಾಂಶದಲ್ಲಿ ಅಳವಡಿಸಿರುವಂತೆ ಭೂ ಪರಿವರ್ತನೆ ತಂತ್ರಾಂಶದಲ್ಲಿಯೂ "FIIO" ಅಳವಡಿಸಲು ಸರ್ಕಾರವು ಉದ್ದೇಶಿಸಿದೆಯೇ;

(ಉ) ಸರ್ಕಾರವು ಅರ್ಜಿದಾರರಿಂದ ಯಾವುದೇ ದಾಖಲಾತಿಯನ್ನು ಕೇಳಬಾರದು ಎಂದು ಆದೇಶ ನೀಡಿದ್ದರೂ, ಕೆಲವು ಜಿಲ್ಲೆಗಳಲ್ಲಿ ಅರ್ಜಿದಾರರಿಗೆ ದಾಖಲಾತಿಗಳನ್ನು ಸಲ್ಲಿಸುವಂತೆ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?